# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002**

ಸಂಖ್ಯೆ: BBMP/Addl.Dir/JD North/LP/0037/2017-18 ದಿನಾಂಕ: 18–07–2019

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ: 32, ಹೊಸ ಸಂಖ್ಯೆ: 33, ಹೂಡಿ ಗ್ರಾಮ, ಕೆ.ಆರ್.ಪುರಂ ಹೋಬಳಿ, (ಹಳೆ ವಾರ್ಡ್ ಸಂಖ್ಯೆ: 82), ಹೊಸ ವಾರ್ಡ್ ಸಂಖ್ಯೆ: 54, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಕ್ಲಬ್‌ಹೌಸ್ ಒಳಗೊಂಡ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/LP/0037/2017-18, ದಿನಾಂಕ: 19–01–2018.

2) ತಮ್ಮ ಮನವಿ ಪತ್ರ ದಿನಾಂಕ: 24–06–2019.

* * * * * * *

ಆಸ್ತಿ ಖಾತಾ ಸಂಖ್ಯೆ: 32, ಹೊಸ ಸಂಖ್ಯೆ: 33, ಹೂಡಿ ಗ್ರಾಮ, ಕೆ.ಆರ್.ಪುರಂ ಹೋಬಳಿ, (ಹಳೆ ವಾರ್ಡ್ ಸಂಖ್ಯೆ: 82), ಹೊಸ ವಾರ್ಡ್ ಸಂಖ್ಯೆ: 54, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ 2 ಸಾಮಾನ್ಯ ತಳ + ನೆಲ + ಮೇಲಿನ 9 ಅಂತಸ್ತುಗಳ ವಿಂಗ್ – ಎ, ಬಿ, ಸಿ ರಲ್ಲಿ 258 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ಹಾಗೂ ನೆಲ ಮತ್ತು ಮೇಲಿನ 2 ಅಂತಸ್ತುಗಳ ಕ್ಲಬ್‌ಹೌಸ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ನಿರ್ಮಾಣ ಮಾಡುತ್ತಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 10–07–2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ವಿಂಗ್ – ಎ, ಬಿ, ಸಿ ರ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ಮತ್ತು ನೆಲ ಬಾಡಿಗೆ ಶುಲ್ಕಕ್ಕೆ ಜಿ.ಎಸ್.ಟಿ. ಶುಲ್ಕ ಸೇರಿದಂತೆ ರೂ. 5,36,950/- ಗಳ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000183 ದಿನಾಂಕ: 18–07–2019 ರಂದು ಸಂದಾಯ ಮಾಡಿರುವುದರಿಂದ, ಸದರಿ ವಿಂಗ್ – ಎ, ಬಿ, ಸಿ ರಲ್ಲಿ 258 ಘಟಕಗಳುಳ್ಳ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

6. ವಿವಿಧ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು

7. ಮಂಜೂರಾತಿ ನಕ್ಷೆಯನ್ವಯ ತಳ + ನೆಲ + ಮೇಲಿನ 4 ಅಂತಸ್ತುಗಳ ಕಟ್ಟಡವನ್ನು ನಿರ್ಮಿಸಿ 5ನೇ ಅಂತಸ್ತಿನ ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಹೆಚ್.ಎ.ಎಲ್. ಇಲಾಖೆಯಿಂದ ಪಡೆದು, ಸದರಿ ನಿರಾಕ್ಷೇಪಣಾ ಪತ್ರವನ್ನು ಪಾಲಿಕೆಗೆ ಸಲ್ಲಿಸತಕ್ಕದ್ದು.

ಸಹಿ/-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

ಮೆ॥ ಎಸ್.ವಿ.ಡೆವಲಪರ್ಸ್ ರವರ ಪರವಾಗಿ ವ್ಯವಸ್ಥಾಪಕ ಪಾಲುದಾರರಾದ
ಕೋಟಾಪತಿ ಜನಾರ್ಧನ್ ರಾವ್ ಮತ್ತು
ಕೊಂಡ ಮಧುಸೂದನ್ ರಾವ್
# 32, ಹೊಸ ಸಂಖ್ಯೆ: 33, ಹೂಡಿ ಗ್ರಾಮ,
ಕೆ.ಆರ್.ಪುರಂ ಹೋಬಳಿ, (ಹಳೆ ವಾರ್ಡ್ ಸಂಖ್ಯೆ: 82),
ಹೊಸ ವಾರ್ಡ್ ಸಂಖ್ಯೆ: 54,
ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು (ಮಹದೇವಪುರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೂಡಿ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B. R. Muddu Ki 18/7/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

18/07 18/7 18/7/19